ಓ.ಎಸ್. ನಂ. 49/2022
ಪಿ.ಡಬ್ಲೂ -2

(ಇಂದು ದಿಃ 12-11-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು)

**ಮುಂದುವರೆದ ಮುಖ್ಯ ವಿಚಾರಣೆ :- ಶ್ರೀ.VJM ವಕೀಲರಿಂದ :-**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯಾಗಿ ಪ್ರತಿಜ್ಞಾ ಪತ್ರವನ್ನು ಸಲ್ಲಿಸಿರುತ್ತೇನೆ.. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನ್ನ ತಿಳುವಳಿಕೆಯ ಮೇರೆಗೆ ಬರೆಯಲ್ಪಟ್ಟಿರುತ್ತವೆ ಮತ್ತು ಅವು ಸತ್ಯವಾಗಿರುತ್ತವೆ. ಪ್ರತಿಜ್ಞಾ ಪತ್ರಕ್ಕೆ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ನಿಪಿ-4 ಮತ್ತು 5 ನ್ನು ತೋರಿಸಲಾಗಿ ಸಾಕ್ಷಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅದೇ ರೀತಿ ನಿಪಿ-4 ಮತ್ತು 5ನ್ನು ಬರೆದುಕೊಟ್ಟ ಪ್ರತಿವಾದಿಯ ಸಹಿಗಳನ್ನು ಕೂಡ ನೋಡಿ ಗುರುತಿಸಿರುತ್ತಾರೆ. ಪ್ರತಿವಾದಿಯ ಸಹಿಗಳನ್ನು ನಪಿ-4(ಎ) ನಿಪಿ-5(ಎ) ಎಂದು ಮತ್ತು ಸಾಕ್ಷಿಯ ಸಹಿಗಳನ್ನು ನಿಪಿ-4(ಬಿ) ಮತ್ತು ನಿಪಿ-5(ಬಿ) ಎಂದು ಗುರುತಿಸಲಾಯಿತು. ನನ್ನ ಜೊತೆ ನಿಪಿ-4 ಮತ್ತು 5 ಕ್ಕೆ ಹರಿಶ್ಚಂದ್ರ ರೆಡ್ಡಿ ಸಹಿ ಮಾಡಿರುತ್ತಾರೆ. ನಿಪಿ-4 ಮತ್ತು 5ಕ್ಕೆ ದೇವಿಂದ್ರಪ್ಪ ಒಪ್ಪಿ ಗೆ ಸಾಕ್ಷಿದಾರರಾಗಿ ಸಹಿ ಮಾಡಿರುತ್ತಾರೆ. ಸಾಕ್ಷಿ ಅವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-4(ಸಿ) ಮತ್ತು ನಿಪಿ-5(ಸಿ) ಎಂದು ಗರುತಿಸಲಾಯಿತು. ನಿಪಿ-4 ನ್ನು ಆಸಿಫ್ ವಕೀಲರು ತಯ್ಯಾರಿಸಿದ್ದಾರೆ.

**ಮುಂದುವರೆದ ಮುಖ್ಯ ವಿಚಾರಣೆ ಇಲ್ಲ.**

**(ಪ್ರತಿವಾದಿ ಪರ ವಕೀಲರ ವಿನಂತಿ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ. ಇದೆ.

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಸೇಡಂ.**